# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ,

## ಟಿ. ನರಸೀಪುರ.

## ಸಿ. ಸಿ ನಂ. 1006/2022

ಪಿರ್ಯಾದಿದಾರರು : ಸರ್ಕಾರ ಪರವಾಗಿ ಬನ್ನೂರು ಪೊಲೀಸ್ ಠಾಣೆ

ವಿರುದ್ಧ

ಆರೋಪಿತರು : 1. ರಾಜೇಶ್ ಬಿನ್ ಹೊಟ್ಟೆಜವರಿ @ ಸಿದ್ದಪ್ಪ, 35 ವರ್ಷ,
ವಾಸಃ ಹನುಮನಾಲು ಗ್ರಾಮ,
ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

## ದೋಷಾರೋಪಣೆ

**ಶ್ರೀ ಸಚಿನ್ ಹೆಚ್.ಆರ್, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಟಿ.ನರಸೀಪುರ, ಆದ ನಾನು ಮೇಲ್ಕಂಡ ಆರೋಪಿಯಾದ ನಿಮ್ಮ ಮೇಲೆ ಕೆಳಕಂಡಂತೆ ದೋಷಾರೋಪಣೆಯನ್ನು ಮಾಡುತ್ತೇನೆ.**

ನಿಮ್ಮ ಮೇಲೆ ಹೊರಿಸಲಾದ ದೋಷಾರೋಪಣೆ ಏನೆಂದರೆ

ದಿನಾಂಕ 20.04.2021 ರಂದು ರಾತ್ರಿ 10.00 ಗಂಟೆ ಸಮಯದಲ್ಲಿ ತಿ.ನರಸೀಪುರ ತಾಲ್ಲೂಕು ಬನ್ನೂರು ಪೊಲೀಸ್ ಠಾಣೆ ಸರಹದ್ದು ಬೀಡನಹಳ್ಳಿ ಗ್ರಾಮದ ಹತ್ತಿರ ಇರುವ ಹೆಗ್ಗೆರೆ ಕೆರೆಯ ದಡದಲ್ಲಿ ಚಾಸಾ-1 ಮತ್ತು 2 ರಾಜು ಮತ್ತು ಮೂಗೇಗೌಡ ರವರು ರಾತ್ರಿಯ ವೇಳೆಯಲ್ಲಿ ಕಾವಲು ಕಾಯುತ್ತಿದ್ದಾಗ 1 ನೇ ಆರೋಪಿಯಾದ ನೀವು ಮೀನು ಕಳ್ಳತನ ಮಾಡಲು ಕೆರೆಗೆ ಬಲೆಯನ್ನು ಹಾಕಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ.511 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಎರಡನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ, 1 ನೇ ಆರೋಪಿಯಾದ ನೀವು ಮೀನು ಕಳ್ಳತನ ಮಾಡಲು ಕೆರೆಗೆ ಬಲೆಯನ್ನು ಹಾಕಿದ್ದು, ಇದನ್ನು ನೋಡಿದ ಚಾಸಾ-1 ರಾಜುರವರು ಚಾಸಾ-5 ಬಸವೇಗೌಡ ರವರಿಗೆ ಫೋನ್ ಮಾಡಿ ವಿಚಾರವನ್ನು ತಿಳಿಸಿದ್ದು ಚಾಸಾ-5 ರವರು ಚಾಸಾ-1 ರವರಿಗೆ ಬಲೆಯನ್ನು ತೆಗೆಯಲು ಹೇಳಿದ್ದು ಚಾಸಾ-1 ಮತ್ತು 2 ರವರು ಬಲೆಯನ್ನು ತೆಗೆಯಲು ಹೋದಾಗ ಆರೋಪಿಯಾದ ನೀವು ಚಾಸಾ-1 ಮತ್ತು 2 ರವರು ಸೂಳೆ ಮಕ್ಕಳೆ ಎಂದು ಅವಾಚ್ಯ ಶಬ್ದದಿಂದ ನಿಂದಿಸಿದ್ದು, ಆ ಮೂಲಕ

ಆರೋಪಿತರಾದ ನೀವುಗಳು ಭಾರತೀಯ ದಂಡ ಸಂಹಿತೆ ಕಲಂ.504 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಮೂರನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ, ಆರೋಪಿಯಾದ ನೀವು, ಬಲೆಯನ್ನು ತೆಗೆಯಲು ಬಂದ ಚಾಸಾ–1 ಮತ್ತು 2 ರಾಜು ಮತ್ತು ಮೂಗೇಗೌಡ ಮತ್ತು ಚಾಸಾ–3 ಮತ್ತು 4 ರವರನ್ನು ನಿಮ್ಮನ್ನು ಇಲ್ಲೆ ಮುಗಿಸುತ್ತೇವೆ ಎಂದು ಕೊಲೆ ಬೆದರಿಕೆ ಹಾಕಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ.506 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ನಾಲ್ಕನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ, ಆರೋಪಿಯಾದ ನೀವು ಚಾಸಾ–1 ರಾಜು ಕೈಗಳಿಂದ ಹೊಡೆದು ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆ ಮೂಲಕ ಆರೋಪಿತರಾದ ನೀವುಗಳು ಭಾರತೀಯ ದಂಡ ಸಂಹಿತೆ ಕಲಂ.323 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ, ಆರೋಪಿಯಾದ ನೀವು ಅಲ್ಲೆ ಬಿದ್ದಿದ್ದ ದೊಣ್ಣೆಯಿಂದ ಚಾಸಾ–1 ರಾಜುರವರ ತಲೆಗೆ ಮತ್ತು ಮೈಕೈಗೆ ಹೊಡೆದು ನೋವುಂಟು ಮಾಡಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ.324 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಮೇಲೆ ಹೇಳಿದ ಅಪರಾಧಗಳಿಗಾಗಿ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಒಳಪಡತಕ್ಕದ್ದು.

ದಿನಾಂಕಃ **06.01.2026.**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.**
**ಟಿ. ನರಸೀಪುರ.**

## **ಆರೋಪಿತರ ಹೇಳಿಕೆ**

ಪ್ರಶ್ನೆ-1 ಈಗ ಓದಿ ಹೇಳಿದ ಆರೋಪಣೆಯನ್ನು ಅರ್ಥ ಮಾಡಿಕೊಂಡಿರಾ ?

ಉತ್ತರಃ 1 ನೇ ಆರೋಪಿಃ

ಪ್ರಶ್ನೆ-2 ಮೇಲೆ ಹೇಳಿದ ಆರೋಪಣೆಯನ್ನು ಒಪ್ಪಿಕೊಳ್ಳುವಿರಾ ? ಅಥವಾ ವಿಚಾರಣೆ ಆಗಬೇಕೆನ್ನುವಿರಾ?

ಉತ್ತರಃ 1 ನೇ ಆರೋಪಿಃ

**(ಮೇಲ್ಕಂಡ ಆರೋಪಣೆಯನ್ನು ಆರೋಪಿತರಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಬರೆದು ಕೊಂಡಿದ್ದು ಅವು ಸರಿಯಾಗಿರುತ್ತದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ.)**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ. ಎಫ್.ಸಿ., ಟಿ.ನರಸೀಪುರ.**

**ಆರೋಪಿತರ ಸಹಿ**

1 ನೇ ಆರೋಪಿಃ